ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳನ್ನು ನಿರ್ವಹಿಸುವ ಸ್ಥಳದಲ್ಲಿ ಅಕುಶಲ ಕೂಲಿ ಕಾರ್ಮಿಕರಿಗೆ ದಿನಗೂಲಿಯ ಮೊತ್ತದ ಜೊತೆಗೆ ಸಲಕರಣೆ/ಉಪಕರಣಗಳ ಹರಿತದ ಬಾಬ್ತಿನ ಹಣ ರೂ.10/-ನ್ನು ಪಾವತಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 39 ಉಖಾಯೋ 2008 ದಿನಾಂಕ: 06-05-2009

2. ಕೇಂದ್ರ ಸರ್ಕಾರದ ಕಾರ್ಯಾಚರಣೆಯ ಮಾರ್ಗಸೂಚಿಗಳು 2013, 4ನೇ ಆವೃತ್ತಿಯ ಅಧ್ಯಾಯ 7ರ ಕಂಡಿಕೆ 7.4.2ರ ಪ್ರಕಾರ

3. ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆ (ಗ್ರಾಕೂಸ್) ರಾಯಚೂರು ಇವರು ಸರ್ಕಾರಕ್ಕೆ ಸಲ್ಲಿಸಿದ ಮನವಿ ದಿನಾಂಕ: 28-04-2014

<u>ಪ್ರಸ್ತಾವನೆ</u>

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾಮಗಾರಿಗಳ ಸ್ಥಳದಲ್ಲಿ ಆಕುಶಲ ದೈಹಿಕ ಕೆಲಸಗಾರರಿಗೆ ಕೆಲಸ ನಿರ್ವಹಿಸಲು ಸಲಕರಣೆಗಳು/ಉಪಕರಣಗಳು ಅತ್ಯವಶ್ಯಕವಾಗಿ ಬೇಕಾಗುತ್ತದೆ. ಉಲ್ಲೇಖ (1)ರಲ್ಲಿ ಕೂಲಿ ಕಾರ್ಮಿಕರು ಕಾಮಗಾರಿ ಸ್ಥಳಗಳಲ್ಲಿ ಕೆಲಸ ನಿರ್ವಹಿಸಲು ಉಪಕರಣಗಳನ್ನು ಹರಿತಮಾಡಿಕೊಂಡು ತೆರಲು ತಾತ್ವಿಕವಾಗಿ ಇದರ ಬಾಬ್ತಿನ ಹಣವನ್ನು ಪಾವತಿ ಮಾಡುವ ಸಂಬಂಧ, ದಿನಗೂಲಿಯ ಜೊತೆಗೆ ಕೆಲಸ ನಿರ್ವಹಿಸಲು ಪ್ರತಿ ಕೆಲಸಗಾರರಿಗೆ ಪ್ರತಿ ದಿನಕ್ಕೆ ರೂ.3.00ಗಳಂತೆ ಪಾವತಿಸಲು ಆದೇಶ ಮಾಡಿದ್ದು, ಈವರೆಗೂ ಅದೇ ದರದಲ್ಲಿಯೇ, ಪಾವತಿಸಲಾಗುತ್ತಿದೆ. ಈಗ ಗ್ರಾಮೀಣಾ ಕೂಲಿ ಕಾರ್ಮಿಕರ ಸಂಘಟನೆ (ಗ್ರಾಕೂಸ್) ರಾಯಚೂರ ಇವರು ಸರ್ಕಾರಕ್ಕೆ ದಿನಾಂಕ: 28-04-2014ರಂದು ಸಲ್ಲಿಸಿದ ಮನವಿಯಲ್ಲಿ ಈಗ ಕೂಲಿಯ ಜೊತೆಯಲ್ಲಿ ನೀಡುತ್ತಿರುವ ಸಲಕರಣೆಗಳು ಬಾಬ್ತಿನ ರೂ. 3.00ಗಳು, ಐದು ವರ್ಷಗಳ ಹಿಂದೆ ನಿಗಧಿಯಾಗಿದ್ದು, ಈಗ ಬೆಲೆಏರಿಕೆಗಳಿಂದ, ಈ ಸಲಕರಣೆಗಳ ಬಾಬ್ತಿನ ಹಣವನ್ನು ರೂ. 10/-ಗಳಿಗೆ ಹೆಚ್ಚಿಸಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ. ಇದರ ಸಂಬಂಧ ಕೇಂದ್ರ ಸರ್ಕಾರದವರು ಯೋಜನೆಗೆ ಹೊರಡಿಸಿರುವ ಕಾರ್ಯಾಚರಣೆಯ ಮಾರ್ಗಸೂಚಿಗಳು 2013 4ನೇ ಆವೃತ್ತಿಯ ಕಂಡಿಕೆ 7.4.2 ರಲ್ಲಿ ಕೂಲಿ ಕಾರ್ಮಿಕರು ಕಾಮಗಾರಿಗಳ ಸ್ಥಳದಲ್ಲಿ ಸಲಕರಣೆ/ಉಪಕರಣಗಳನ್ನು ಹರಿತಮಾಡಿ ತರುವುದಕ್ಕಾಗಿ ಹಣವನ್ನು ನಿಗಧಿ ಮಾಡಿ ಪಾವತಿ ಮಾಡಲು ಅವಕಾಶ ಕಲ್ಪಿಸಿರುತ್ತದೆ. ಆದರೆ ಯಾವುದೇ ಕಾರಣಕ್ಕೂ ಜಿಲ್ಲಾ ಪಂಚಾಯತ್/ತಾಲ್ಲೂಕು ಪಂಚಾಯತ್/ಗ್ರಾಮ ಪಂಚಾಯತ್ ಮಟ್ಟದಲ್ಲಿ ಸಲಕರಣೆ/ಸಾಮಗ್ರಿಗಳನ್ನು ಖರೀದಿ ಮಾಡದಂತೆ ಕ್ರಮವಹಿಸಲು ಈಗಾಗಲೇ ಉಲ್ಲೇಖ (1)ರ ಆದೇಶದಲ್ಲಿ ತಿಳಿಸಲಾಗಿರುತ್ತದೆ. ಈ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಕಾಮಗಾರಿಗಳ ಸ್ಥಳಗಳಲ್ಲಿ ಕೆಲಸ ನಿರ್ವಹಿಸುವ ಪ್ರತಿ ಕೆಲಸಗಾರರಿಗೆ ಪ್ರತಿ ದಿನಕ್ಕೆ ರೂ. 10.00ಗಳನ್ನು ದಿನಗೂಲಿಯ ಜೊತೆಯಲ್ಲಿ ಪಾವತಿಸಲು ಸೂಕ್ತವೆಂದು ಹಾಗೂ ಈಗ ಹೊಸದರವನ್ನು ಜಾರಿಗೆ ತರುವ ಹಿನ್ನೆಲೆಯಲ್ಲಿ ಈ ಹಿಂದೆ ಉಲ್ಲೇಖ (1)ರಲ್ಲಿ ಹೊರಡಿಸಲಾದ ಆದೇಶವನ್ನು ಹಿಂಪಡೆಯಲು ತೀರ್ಮಾನಿಸಲಾಗಿರುತ್ತದೆ. ಸಲಕರಣೆಗಳ/ಉಪಕರಣಗಳ ಹರಿತದ ಬಾಬ್ತಿನ ಹಣವನ್ನು ಶೇಕಡಾ 40ರಷ್ಟಿನ ಸಾಮಗ್ರಿ ಘಟಕದ ವೆಚ್ಚದಡಿ ಪಾವತಿಸಬೇಕಾಗುತ್ತದೆ. ಇದನ್ನು ಕೂಡ e-FMS ಮೂಲಕ ಕೂಲಿಕಾರರ ಉಳಿತಾಯದ ಖಾತೆಗೆ ಜಮೆಮಾಡಿ ಪಾವತಿಸಬೇಕಾಗುತ್ತದೆ. ಆದುದರಿಂದ ಈ ಕೆಳಕಂಡ ಆದೇಶ

ಪ್ರಸ್ತಾವನೆಯಲ್ಲಿ ಎಲ್ಲಾ ಅಂಶಗಳನ್ನು ಪರಿಗಣಿಸಿ, ತಕ್ಷಣದಿಂದಲೇ, ಜಾರಿಗೆ ತರುವಂತೆ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕೆಲಸ ನಿರ್ವಹಿಸುವ ಪ್ರತಿ ಕೆಲಸಗಾರರಿಗೂ ಪ್ರತಿ ದಿನಕ್ಕೆ ರೂ. 10.00 (ಹತ್ತು ರೂಪಾಯಿ ಮಾತ್ರ)ಗಳನ್ನು ಸಲಕರಣೆಗಳು/ಉಪಕರಣಗಳ ಹರಿತದ ಬಾಬ್ತಿನ ಮೊತ್ತವಾಗಿ ದಿನಗೂಲಿ ವೇತನದ ಜೊತೆಗೆ ಕೆಲಸಗಾರರ ಉಳಿತಾಯದ ಖಾತೆಗಳಿಗೆ e-FMS ಮೂಲಕ ಜಮೆಮಾಡಿ ಪಾವತಿ ಮಾಡಲು ಕ್ರಮವಹಿಸುವಂತೆ ಹಾಗೂ ಸದರಿ ಸಲಕರಣೆ/ಉಪಕರಣಗಳ ಹರಿತದ ಬಾಬ್ತು ಕೆಲಸಗಾರರಿಗೆ ನೀಡಲಾಗುವ ಹಣದ ವೆಚ್ಚವನ್ನು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಶೇಕಡ 40ರಷ್ಟಿನ ಸಾಮಗ್ರಿ ಘಟಕದ ವೆಚ್ಚದಲ್ಲಿ ಭರಿಸುವಂತೆ ಆದೇಶಿಸಿದೆ.

ಆದೇಶಿಸಿದ ಸಲಕರಣೆಗಳು/ಉಪಕರಣಗಳ ಹರಿತದ ಬಾಬ್ತಿನ ವೆಚ್ಚವನ್ನು ಅಯಾ ಕಾಮಗಾರಿಗಳ ಅಂದಾಜು ಪತ್ರಿಕೆಗಳಲ್ಲಿ ಸೇರಿಸಿ ನಿಗದಿ ಪಡಿಸಿರುವ ಮೊತ್ತದಲ್ಲಿ ವೆಚ್ಚವನ್ನು ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ರೋಹಿಣಿ ಸಿಂಧೂರಿ)
ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು
ಹಾಗೂ ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಗೆ:

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು
3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
4. ರಾಜ್ಯದ ಎಲ್ಲಾ ಜಿಲ್ಲೆಗಳ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
6. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು ಬೆಂಗಳೂರು

7. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ
8. ವಿಶೇಷ ಆಯುಕ್ತರು (ಅರಣ್ಯ), ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
9. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕರಿಗೆ
10. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
11. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
12. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು
13. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
14. ಆಯುಕ್ತರು, ಪಶುಸಂಗೋಪನ ಇಲಾಖೆ, ವಿ.ವಿ.ಟವರ್, ಬೆಂಗಳೂರು
15. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
16. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಬೆಂಗಳೂರು/ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಸಾಮಾಜಿಕ ಅರಣ್ಯ), ಅರಣ್ಯ ಭವನ, ಬೆಂಗಳೂರು
17. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು
18. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು
19. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು–570011
20. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ದಕ್ಷಿಣ ವಲಯ ಜಲ ಸಂಪನ್ಮೂಲ ಇಲಾಖೆ ಆನಂದ್‌ರಾವ್ ವೃತ್ತ, ಬೆಂಗಳೂರು/ಉತ್ತರ ವಲಯ ಬಿಜಾಪುರ
21. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆ, ಬೆಂಗಳೂರು
22. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
23. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ ಬೆಂಗಳೂರು
24. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ
25. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
26. ಶ್ರೀ. ಶ್ರೀನಿವಾಸ ಮಾರಂಗಪ್ಪನವರ್ ವಿಶೇಷಾಧಿಕಾರಿ ಗಣಕಕೋಶ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
27. ಶ್ರೀ. ವೈ. ಮಹಾಂಕಾಳಪ್ಪ ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
28. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
29. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ